## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

### ವಾರ್ಡ್ -145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಸಿದ್ದಾಪುರ ವಾರ್ಡ್-144 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀ. ನರಸಾರಾಮಾರಾವ್ ಅಧೀಕ್ಷಕ ಅಭಿಯಂತರರು (ದಕ್ಷಿಣ), ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:30/09/2021 ರಂದು ಗುರುವಾರ ಬೆಳಗ್ಗೆ 10.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು 9ನೇ ಅಡ್ಡರಸ್ತೆಯಲ್ಲಿರುವ ಮಾನ್ಯ ವಲಯ ಜಂಟಿ ಆಯುಕ್ತರು (ದಕ್ಷಿಣ) ರವರ ಕಛೇರಿ ಸಭಾಂಗಣದಲ್ಲಿ ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:-**

1. ಅಧೀಕ್ಷಕ ಅಭಿಯಂತರರು (ದಕ್ಷಿಣ) ಹಾಗೂ ವಾರ್ಡ್ 144ರ ನೋಡಲ್ ಅಧಿಕಾರಿ.
2. ಸಹಾಯಕ ಅಭಿಯಂತರರು, ವಾರ್ಡ್-144.
3. ಶ್ರೀ. ಪವನ್‌ಗೌಡ ಸಹಾಯಕ ಅಭಿಯಂತರರು, (ಸ್ಲಂ ಬೋರ್ಡ್)
4. ಶ್ರೀ. ಎಂ.ಎಂ. ಬಾಬುಜಿ ಕಂದಾಯ ಪರಿವೀಕ್ಷಕರು ವಾರ್ಡ್-144.
5. ಶ್ರೀ. ರಾಘವೇಂದ್ರ, ಕಂದಾಯ ವಸೂಲಿಗಾರರು ವಾರ್ಡ್-144.
6. ಕುಮಾರಿ. ಸುರೇಖ ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-144.
7. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.

**ಸಭೆಗೆ ಗೈರು ಹಾಜರಾದ ಇಲಾಖೆಗಳು:-**

1. ಸಿದ್ದಾಪುರ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ ಮತ್ತು ಸಂಚಾರ ವಾರ್ಡ್ 144.
2. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇಲಾಖೆಯ ಅಧಿಕಾರಿಗಳು.
3. ಬೆಸ್ಕಾಂ ಇಲಾಖೆಯ ಅಧಿಕಾರಿಗಳು.
4. ಅರಣ್ಯ ಇಲಾಖೆಯ ಅಧಿಕಾರಿಗಳು.
5. ತೋಟಗಾರಿಗೆ ಇಲಾಖೆಯ ಅಧಿಕಾರಿಗಳು.
6. ಬಿಬಿಎಂಪಿ ವಿದ್ಯುತ್ ವಿಭಾಗ ಅಧಿಕಾರಿಗಳು.

*********



Scanned with CamScanner

1. ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಉಪಯೋಗಕ್ಕೆ ಶೌಚಾಲಯಗಳನ್ನು ಮಲ್ಲಿಗೆ ಆಸ್ಪತ್ರೆ ಹತ್ತಿರ ನಿರ್ಮಾಣ ಮಾಡಲು ಸಭೆಯಲ್ಲಿ ನಾಗರೀಕರು ಕೋರಿದರು. ಈ ವಿಷಯದ ಬಗ್ಗೆ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದ ನಾಗರೀಕರಿಗೆ, ಪ್ರಸ್ತುತ ಆಯವ್ಯಯದಲ್ಲಿ ಅನುದಾನ ಇಲ್ಲದೇ ಇರುವ ಕಾರಣ ಮುಂದಿನ ಸಾಲಿನ ಆಯೋಗದಲ್ಲಿ ಅನುದಾವನ್ನು ಅಳವಡಿಸಿಕೊಂಡು ಶೌಚಾಲಯಗಳನ್ನು ನಿರ್ಮಿಸಲು ಸಂಬಂಧಪಟ್ಟ ಇಲಾಖೆಗೆ ತಿಳಿಸಿ ಕ್ರಮ ವಹಿಸಲಾಗುವುದು ಎಂದು ಸಭೆಗೆ ಹೇಳಿದರು.

2. ವಾರ್ಡ್‌ನ ವ್ಯಾಪ್ತಿಯಲ್ಲಿ ಕಾವೇರಿ ನೀರು ಸರಿಯಾದ ಸಮಯಕ್ಕೆ ಹಾಗೂ ಸಮರ್ಪಕವಾಗಿ ಬರುತ್ತಿಲ್ಲವೆಂದು ಹಾಗೂ ಬ್ರಾಂಡ್ ಫ್ಯಾಕ್ಟರಿ ಹತ್ತಿರ ಮ್ಯಾನ್‌ಹೋಲ್ ಕುಸಿದಿದ್ದು, ಸರಿಪಡಿಸಲು ವಾರ್ಡಿನ ನಾಗರೀಕರು ಸಭೆಯಲ್ಲಿ ತಿಳಿಸಿದರು. BWSSB ಅಧಿಕಾರಿಗಳು ಸಭೆಗೆ ಗೈರುಹಾಜರಾಗಿರುವುದರಿಂದ ಸದರಿ ವಿಷಯದ ಬಗ್ಗೆ BWSSB ಇಲಾಖೆಗೆ ಕ್ರಮ ಕೈಗೊಳ್ಳಲು ಕೋರಲಾಗುವುದು ಎಂದು ಅಧ್ಯಕ್ಷರು ಸಭೆಗೆ ತಿಳಿಸಿದರು.

3. ವಾರ್ಡಿನಲ್ಲಿ ಕೋವಿಡ್–19 ರಿಂದ ಮೃತ ಪಟ್ಟವರಿಗೆ ರೂ. 1.00 ಲಕ್ಷದ ಪರಿಹಾರದ ಬಗ್ಗೆ ನಾಗರೀಕರು ಸಭೆಯಲ್ಲಿ ಪ್ರಸ್ತಾಪಿಸಿದರು. ಈ ಸಂಬಂಧ ಸದರಿ ವಿಷಯದ ಬಗ್ಗೆ ಆರೋಗ್ಯ ಇಲಾಖೆಯವರನ್ನು ವಿಚಾರಿಸಲಾಗುವುದೆಂದು ಅಧ್ಯಕ್ಷರು ಸಭೆಯಲ್ಲಿ ತಿಳಿಸಿದರು.

4. ವಾರ್ಡ್ ವ್ಯಾಪ್ತಿಯಲ್ಲಿ ಕಸವನ್ನು ಪಡೆಯಲು ಸರಿಯಾದ ಸಮಯಕ್ಕೆ ಗಾಡಿಗಳು ಬರುತ್ತಿಲ್ಲವೆಂದು ನಾಗರೀಕರು ಸಭೆಗೆ ತಿಳಿಸಿದರು. ಸಂಬಂಧಿಸಿದಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಗುತ್ತಿಗೆದಾರರು ಮಾತನಾಡಿ ಕಸ ಸರಿಯಾಗಿ ವಿಲೇವಾರಿಯಾಗದೇ ಸಮಸ್ಯೆಯಾಗಿದೆ. ಎರಡು ದಿನಗಳಲ್ಲಿ ಸರಿಪಡಿಸಲಾಗುವುದು ಎಂದು ಸಭೆಗೆ ತಿಳಿಸಿದರು.

5. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳು ಸರಿಯಾಗಿ ಉರಿಯುತ್ತಿಲ್ಲ ಹಾಗೂ ವಾರ್ಡಿನ ಎಲ್ಲಾ ಜಂಕ್ಷನ್‌ನಲ್ಲಿ ಹೈಮಾಸ್ಕ್ ದೀಪವನ್ನು ಅಳವಡಿಸಲು ನಾಗರೀಕರು ಕೋರಿದರು. ಬಿಬಿಎಂಪಿ ವಿದ್ಯುತ್ ಅಧಿಕಾರಿಗಳು ಸಭೆಗೆ ಗೈರುಹಾಜರಾಗಿರುವುದರಿಂದ ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳಲು ಸದರಿಯವರಿಗೆ ಕೋರಲಾಗುವುದು ಎಂದು ಅಧ್ಯಕ್ಷರು ಸಭೆಗೆ ತಿಳಿಸಿದರು.

Scanned with CamScanner

6. ವಾರ್ಡ್ ವ್ಯಾಪ್ತಿಯಲ್ಲಿ ಕಾಮಗಾರಿ ಕೈಗೊಳ್ಳಲು ಈ ಕೆಳಗಿನಂತೆ ಅನುದಾನ ನೀಡಿದ್ದು, ಅಂದಾಜು ಪಟ್ಟಿ ತಯಾರಿಸುವ ಬಗ್ಗೆ ಸಭೆಗೆ ತಿಳಿಸಲಾಯಿತು.

i. Annual Maintenance of Borewells and Water supply pipe lines in Ward Jurisdiction in ward No.144-Siddapura. (ಸದರಿ ಕಾಮಗಾರಿಯನ್ನು ವಾರ್ಡ್ ವ್ಯಾಪ್ತಿಯ ಸಿದ್ದಾಪುರ, ಸೋಮೇಶ್ವರನಗರ, ಗುಟ್ಟೇಪಾಳ್ಯ, ಕೆ.ಎಂ. ಕಾಲೋನಿ ಹಾಗೂ ಅವಶ್ಯಕ ವಾರ್ಡಿನ ಪ್ರದೇಶಗಳಲ್ಲಿ ಕೈಗೊಳ್ಳಲಾಗುವುದು).

ii. Maintenance of footpaths, drain and Re-asphalting of damages roads in Ward Jurisdiction in Ward No 144 - Siddapura. (ಸದರಿ ಕಾಮಗಾರಿಯನ್ನು ಸೋಮೇಶ್ವರನಗರದ 8ನೇ, 10ನೇ ಮತ್ತು ಅರೆಕೆಂಪನಹಳ್ಳಿಯ ಅಡ್ಡರಸ್ತೆಗಳ ಚರಂಡಿಗಳು ಮತ್ತು ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲಾಗಿರುತ್ತದೆ).

iii. Filling of Potholes in ward Jurisdiction in Ward No 144- Siddapura. (ಸದರಿ ಕಾಮಗಾರಿಯನ್ನು ವಾರ್ಡ್ ವ್ಯಾಪ್ತಿಯಲ್ಲಿ ಆಗಾಗ್ಗೆ ಬೀಳುವ ರಸ್ತೆ ಗುಂಡಿಗಳನ್ನು ನಿರ್ವಹಿಸಲು ಕ್ರಮ ಕೈಗೊಳ್ಳಲಾಗುತ್ತದೆ).

7. ವಾರ್ಡ್ ವ್ಯಾಪ್ತಿಯಲ್ಲಿ ಸೊಳ್ಳೆಗಳಿಗೆ ಔಷದಿ ಸಿಂಪಡಿಸಲು ಕೋರಿದರು. ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಪ್ರತಿದಿನ ನಿಗಧಿತ ಔಷದಿಯನ್ನು ನೀಡುತ್ತಿದ್ದು, ವಾರ್ಡ್‌ನ ಆಯ್ದ ಭಾಗಗಳಲ್ಲಿ ಪ್ರತಿದಿನ ಸಿಂಪಡಿಸಲಾಗುತ್ತಿದೆ ಎಂದು ತಿಳಿಸಿದರು.

8. ವಾರ್ಡ್ ವ್ಯಾಪ್ತಿಯಲ್ಲಿ ಹಲವು ರಸ್ತೆಗಳಲ್ಲಿ ನಾಮಫಲಕ ಹಾಕಲು ವಾರ್ಡ್‌ನ ನಾಗರೀಕರು ಕೋರಿದರು. ಸದರಿ ವಿಷಯದ ಬಗ್ಗೆ ವಾರ್ಡಿನ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ನಾಮಫಲಕಗಳ ಕಾಮಗಾರಿ ಪ್ರಗತಿಯಲ್ಲಿರುವುದೆಂದು ಅಧ್ಯಕ್ಷರಿಗೆ ಮನವರಿಕೆ ಮಾಡಿದರು.

9. ವಾರ್ಡ್ ವ್ಯಾಪ್ತಿಯಲ್ಲಿ ಆಸ್ಪತ್ರೆಗಳು, ಬ್ಯಾಂಕುಗಳ ಸಂಪರ್ಕ ಇಲ್ಲದಿರುವ ಬಗ್ಗೆ ನಾಗರೀಕರು ಸಭೆಯಲ್ಲಿ ದೂರಿದರು. ಅದಕ್ಕೆ ಸಂಬಂಧಪಟ್ಟ ಇಲಾಖೆಯವರ ಜೊತೆ ಚರ್ಚಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.



Scanned with CamScanner

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

AE 30/9/21.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 144 .
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

30/9

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 144
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned with CamScanner